# ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹದಿನಾಲ್ಕನೇ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

ಬುಧವಾರ, ದಿನಾಂಕ 28ನೇ ಡಿಸೆಂಬರ್, 2022
(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

## 1. ಅತ್ಯುತ್ತಮ ಶಾಸಕ ಪ್ರಶಸ್ತಿ ಪ್ರದಾನ

## 2. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೇ ಪಟ್ಟಿ

## 3. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

ಮಾನ್ಯ ಸದಸ್ಯರುಗಳಿಗೆ ಪ್ರತ್ಯೇಕವಾಗಿ ಕಳುಹಿಸಲಾಗಿರುವ ಮೂರನೇ ಪಟ್ಟಿ ರೀತ್ಯಾ

## 4. ವರದಿಗಳನ್ನೊಪ್ಪಿಸುವುದು

ಕರ್ನಾಟಕ ವಿಧಾನಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 2021–22ನೇ ಸಾಲಿನ ಎಂಟನೇ ಮತ್ತು ಒಂಬತ್ತನೇ

ಹಾಗೂ

ಕರ್ನಾಟಕ ವಿಧಾನಸಭೆಯ ಸರ್ಕಾರಿ ಭರವಸೆಗಳ ಸಮಿತಿಯ 2021–22ನೇ ಸಾಲಿನ ಹದಿನಾಲ್ಕನೇ ವರದಿಗಳನ್ನೊಪ್ಪಿಸುವುದು.

## 5. ವಿತ್ತೀಯ ಕಾರ್ಯಕಲಾಪಗಳು

2022–23ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತಿನ ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

.. 2/ ..

## 6. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀ ಸಿದ್ದರಾಮಯ್ಯ ಹಾಗೂ ಇತರರು ಮತ್ತು ಶ್ರೀ ಹೆಚ್.ಡಿ. ರೇವಣ್ಣ ಹಾಗೂ ಇತರರು** – ರಾಜ್ಯಾದ್ಯಂತ ಅತಿವೃಷ್ಟಿ, ಅನಾವೃಷ್ಟಿ, ಹವಾಮಾನ ವೈಪರಿತ್ಯಗಳಿಂದಾಗಿ, ಕಳಪೆ ಬೀಜ, ಕಳಪೆ ಗೊಬ್ಬರ, ನಿಷೇಧಿತ ಕೀಟ ನಾಶಕಗಳ ಮಾರಾಟ, ಮಾರುಕಟ್ಟೆಯಲ್ಲಿ ಬೆಳೆಗಳ ದರ ಕುಸಿತದಿಂದ ತೀವ್ರ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳು ಅನುಭವಿಸುತ್ತಿರುವ ಸಮಸ್ಯೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

2) **ಶ್ರೀ ಹೆಚ್. ಹಾಲಪ್ಪ ಹರತಾಳು ಮತ್ತು ಶ್ರೀ ದಿನಕರ ಕೇಶವ ಶೆಟ್ಟಿ ಇವರುಗಳು** – ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ ಅಧಿನಿಯಮ ಮತ್ತು ನಿಯಮಗಳನ್ನು ಸರಳೀಕರಿಸಿ, ಅರಣ್ಯ ಭೂ ಮಂಜೂರಾತಿ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಹೆಚ್.ಡಿ. ರೇವಣ್ಣ, ಕೆ.ಎಸ್.ಲಿಂಗೇಶ್, ಎ. ಮಂಜುನಾಥ್ ಹಾಗೂ ಇತರರು** – ಬೆಂಗಳೂರು, ಬೆಂಗಳೂರು ಗ್ರಾಮಾಂತರ ಹಾಗೂ ರಾಮನಗರ ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ವಿವಿಧ ವೃಂದಗಳ ಹುದ್ದೆಗಳ ನೇಮಕಾತಿಯಲ್ಲಿ ಹಾಗೂ ಬೆಂಗಳೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದ ವ್ಯಾಪ್ತಿಯಲ್ಲಿನ ವಿವಿಧ ಕಟ್ಟಡಗಳ ಕಾಮಗಾರಿಯಲ್ಲಿ ಅಕ್ರಮವಾಗಿರುವ ಕುರಿತು ಸಮಗ್ರವಾಗಿ ತನಿಖೆ ನಡೆಸುವ ಬಗ್ಗೆ ಹಾಗೂ ಬೆಂಗಳೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟವು ಹಾಲು ಉತ್ಪಾದಕರಿಗೆ ಕಡಿಮೆ ದರವನ್ನು ಪಾವತಿಸುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4) **ಶ್ರೀಯುತರುಗಳಾದ ಸಿದ್ದರಾಮಯ್ಯ, ಆರ್.ವಿ. ದೇಶಪಾಂಡೆ, ಡಾ. ಜಿ. ಪರಮೇಶ್ವರ್, ಕೃಷ್ಣ ಬೈರೇಗೌಡ ಹಾಗೂ ಪ್ರಿಯಾಂಕ ಖರ್ಗೆ ಇವರುಗಳು** – ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಿವಿಧ ರೀತಿಯ ಕಾಮಗಾರಿಗಳು ಹಾಗೂ ವಿವಿಧ ಇಲಾಖೆಗಳಲ್ಲಿನ ನೇಮಕಾತಿ, ಬಡ್ತಿ, ವರ್ಗಾವಣೆ, ಖರೀದಿ, ಮಾರಾಟದಲ್ಲಿ ಭ್ರಷ್ಟಾಚಾರ ಮತ್ತು ಕಳಪೆ ಗೊಬ್ಬರ, ರಾಸಾಯನಿಕಗಳು, ಬಿತ್ತನೆ ಬೀಜಗಳ ಮಾರಾಟ ಇವುಗಳನ್ನು ನಿಯಂತ್ರಿಸುವಲ್ಲಿ ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ

ಹಾಗೂ

**ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಬಂಡೆಪ್ಪ ಖಾಶೆಂಪೂರ, ಎ.ಟಿ. ರಾಮಸ್ವಾಮಿ, ಎಂ. ಕೃಷ್ಣಾರೆಡ್ಡಿ, ಕೆ.ಎಂ. ಶಿವಲಿಂಗೇಗೌಡ ಹಾಗೂ ಇತರರು** – ರಾಜ್ಯದಲ್ಲಿ ಪರಿಶಿಷ್ಟ ಜಾತಿಗಳು ಮತ್ತು ಪರಿಶಿಷ್ಟ ಪಂಗಡಗಳಿಗೆ ಸೇರಿರುವ ರೈತರುಗಳಿಗೆ ಒದಗಿಸುವ ಗಂಗಾ ಕಲ್ಯಾಣ ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಕೇಂದ್ರ ಸರ್ಕಾರವು ನೀಡಿರುವ ಸಬ್ಸಿಡಿ ಸೌಲಭ್ಯವನ್ನು ಪಡೆಯುವಲ್ಲಿ ರಾಜ್ಯ ಸರ್ಕಾರವು ವಿಫಲವಾಗಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

5) **ಶ್ರೀಯುತರುಗಳಾದ ಹೆಚ್.ಕೆ. ಪಾಟೀಲ್, ಕೃಷ್ಣ ಬೈರೇಗೌಡ, ಎ.ಟಿ. ರಾಮಸ್ವಾಮಿ ಹಾಗೂ ಶ್ರೀಮತಿ ಸೌಮ್ಯ ರೆಡ್ಡಿ ಇವರುಗಳು** – ಬೆಂಗಳೂರಿನಲ್ಲಿರುವ ಟರ್ಫ್ ಮತ್ತು ಗಾಲ್ಫ್ ಕ್ಲಬ್‌ಗಳು ಬಾಕಿ ಇರುವ ಕೋಟ್ಯಾಂತರ ರೂಪಾಯಿಗಳ ಬಾಡಿಗೆಯನ್ನು ಪಾವತಿಸದೇ ರಾಜ್ಯದ ಬೊಕ್ಕಸಕ್ಕೆ ಮಾಡಿರುವ ನಷ್ಟದ ಬಗ್ಗೆ ಹಾಗೂ ಗುತ್ತಿಗೆ ಅವಧಿ ಮುಗಿದಿರುವ ಸದರಿ ಖಾಸಗಿ ಕ್ಲಬ್‌ಗಳನ್ನು ಬೆಂಗಳೂರಿನ ಹೊರಭಾಗಕ್ಕೆ ಸ್ಥಳಾಂತರಿಸಿ, ಸದರಿ ಪ್ರದೇಶಗಳಲ್ಲಿ ಉದ್ಯಾನವನ, ಆಟದ ಮೈದಾನಗಳನ್ನು ನಿರ್ಮಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

.. 3/ ..

6) **ಶ್ರೀ ಸಿದ್ದರಾಮಯ್ಯ ಮತ್ತು ಇತರರು ಹಾಗೂ ಶ್ರೀ ಹೆಚ್. ಹಾಲಪ್ಪ ಹರತಾಳು ಮತ್ತು ಇತರರು –** ಶರಾವತಿ ಯೋಜನೆಗೆ ಭೂಮಿಯನ್ನು ಬಿಟ್ಟುಕೊಟ್ಟ ಸಂತ್ರಸ್ಥರಿಗಾಗಿ ಅರಣ್ಯ ಇಲಾಖೆಯ ಜಮೀನುಗಳ ಡಿ ರಿಸರ್ವ್ ಮಾಡಿರುವುದನ್ನು ರದ್ದುಪಡಿಸಿರುವುದರಿಂದ ಬಹುತೇಕ ಕುಟುಂಬಗಳು ಜಮೀನು ಕಳೆದುಕೊಂಡು ಪುನಃ ನಿರಾಶ್ರಿತರಾಗುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

7) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ರವೀಂದ್ರ ಶ್ರೀಕಂಠಯ್ಯ, ಸುರೇಶ್ ಗೌಡ ಹಾಗೂ ಇತರರು –** ಹಾಸನ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಪರವಾನಿಗೆ ಪಡೆದ ಹಾಗೂ ಪರವಾನಿಗೆ ಪಡೆಯದೆ ಅಕ್ರಮವಾಗಿ ಕಲ್ಲು ಗಣಿಗಾರಿಕೆ ನಡೆಸುತ್ತಿರುವ ಉದ್ಯಮಿಗಳು ರಾಯಲ್ಟಿ ಶುಲ್ಕ ಮತ್ತು ಜಿ.ಎಸ್.ಟಿ. ಶುಲ್ಕ ಪಾವತಿಸದೆ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟು ಮಾಡುತ್ತಿರುವ ಕುರಿತು ಸಮಗ್ರ ತನಿಖೆ ನಡೆಸಿ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

8) **ಶ್ರೀಯುತರುಗಳಾದ ಹೆಚ್.ಕೆ. ಕುಮಾರಸ್ವಾಮಿ, ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಎಂ.ವಿ. ವೀರಭದ್ರಯ್ಯ, ರವೀಂದ್ರ ಶ್ರೀಕಂಠಯ್ಯ ಹಾಗೂ ಇತರರು –** ಹಾಸನ ತಾಲ್ಲೂಕು ಕಸಬಾ ಹೋಬಳಿಯ ವಿವಿಧ ಗ್ರಾಮಗಳಲ್ಲಿನ ಕೆಲವು ಜಮೀನುಗಳಿಗೆ ಸರಿಯಾದ ದಾಖಲಾತಿಗಳು ಇಲ್ಲದಿದ್ದರೂ ಸರ್ವೆ ಮಾಡಿಸದೇ, ಜಮೀನುಗಳ ದುರಸ್ತಿ ಮಾಡಿಸದೇ ಅನ್ಯಸಂಕ್ರಮಣ ಮಾಡಿಸದೇ ಟೌನ್ ಪ್ಲಾನಿಂಗ್ ಅನುಮೋದನೆ ಹಾಗೂ ಸಂಬಂಧಪಟ್ಟ ಇಲಾಖೆಗಳಿಂದ ನಿರಾಕ್ಷೇಪಣಾ ಪತ್ರಗಳನ್ನು ಪಡೆಯದೇ ಭೂಮಾಫಿಯಾದವರು ಕಾನೂನುಬಾಹಿರವಾಗಿ ಬಡಾವಣೆಗಳನ್ನು ರಚಿಸಿ ನಿವೇಶನಗಳನ್ನು ಮಾರಾಟ ಮಾಡಿ ಸರ್ಕಾರದ ಬೊಕ್ಕಸಕ್ಕೆ ಕೋಟ್ಯಾಂತರ ರೂಪಾಯಿಗಳ ನಷ್ಟ ಉಂಟು ಮಾಡಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

9) **ಶ್ರೀ ಎಸ್. ಆರ್. ವಿಶ್ವನಾಥ್, ಶ್ರೀ ಕೆ.ಜಿ. ಬೋಪಯ್ಯ ಹಾಗೂ ಇತರರು ಮತ್ತು ಶ್ರೀ ಕೆ.ವೈ. ನಂಜೇಗೌಡ, ಶ್ರೀ ಕೃಷ್ಣ ಬೈರೇಗೌಡ ಹಾಗೂ ಇತರರು –** ರಾಜ್ಯದಲ್ಲಿ ಒಕ್ಕಲಿಗ ಸಮುದಾಯಕ್ಕೆ ಶೈಕ್ಷಣಿಕ, ಔದ್ಯೋಗಿಕ, ರಾಜಕೀಯ ಕ್ಷೇತ್ರಗಳಲ್ಲಿ ಪ್ರಸ್ತುತ ಇರುವ ಮೀಸಲಾತಿ ಪ್ರಮಾಣವನ್ನು ಹೆಚ್ಚಿಸುವ ಬಗ್ಗೆ ಮತ್ತು ಕುಂಚಿಟಿಗ ಹಾಗೂ ಇತರೆ ಉಪ ಜಾತಿಗಳನ್ನು ಓ.ಬಿ.ಸಿ. ಪಟ್ಟಿಯಲ್ಲಿ ಸೇರ್ಪಡೆಗೊಳಿಸುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

## 7. ವಿಶೇಷ ಚರ್ಚೆ

1) ಉತ್ತರ ಕರ್ನಾಟಕ ಅಭಿವೃದ್ಧಿ ಕುರಿತು ವಿಶೇಷ ಚರ್ಚೆ

2) ರಾಜ್ಯದಲ್ಲಿ ಕಾಡುಪ್ರಾಣಿಗಳ ಹಾವಳಿ ಕುರಿತು ವಿಶೇಷ ಚರ್ಚೆ

3) ರಾಜ್ಯದಲ್ಲಿ ಹೊಸ ಪಿಂಚಣಿ ಯೋಜನೆಯನ್ನು (ಎನ್‌ಪಿಎಸ್) ರದ್ದುಗೊಳಿಸಿ ಹಳೆಯ ಪಿಂಚಣಿ ಯೋಜನೆಯನ್ನು ಜಾರಿಗೊಳಿಸುವ ಕುರಿತು ವಿಶೇಷ ಚರ್ಚೆ

## 8. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ ಅವರು** – ಬೀದರ್ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್‌ನಿಂದ ಸಾಲ ಪಡೆದು ಬಾಕಿದಾರರಾಗಿರುವವರು ನಾರಂಜಾ ಸಕ್ಕರೆ ಕಾರ್ಖಾನೆಯ ಆಡಳಿತ ಮಂಡಳಿಯ ಅಧ್ಯಕ್ಷರಾಗಿ ಸಂಸ್ಥೆಯನ್ನು ಸಾಲದ ಶೂಲಕ್ಕೆ ತಳ್ಳುತ್ತಿರುವುದರಿಂದ ಅವರ ವಿರುದ್ಧ ಕ್ರಮಕೈಗೊಳ್ಳುವ ಬಗ್ಗೆ ಮಾನ್ಯ ಸಹಕಾರ ಸಚಿವರ ಗಮನ ಸೆಳೆಯುವುದು.

2) **ಶ್ರೀ ಕೆ.ಆರ್. ರಮೇಶ್ ಕುಮಾರ್ ಅವರು** – ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಲ್ಲಿ (ಕೆ.ಪಿ.ಟಿ.ಸಿ.ಎಲ್.) ನೇಮಕಾತಿಗೆ ಸಂಬಂಧಿಸಿದಂತೆ ಖಾಲಿ ಉಳಿದಿರುವ ಹುದ್ದೆಗಳನ್ನು ಕ್ಯಾರಿ ಫಾರ್ವರ್ಡ್ ಮಾಡಿರುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

3) **ಶ್ರೀ ನಾಗನಗೌಡ ಕಂದಕೂರು ಅವರು** – ಗುರುಮಿಠಕಲ್ ಪುರಸಭೆ ವ್ಯಾಪ್ತಿಯ ಪರಿಶಿಷ್ಟ ಜಾತಿಯ ನಿವೇಶನ ರಹಿತರಿಗೆ ರಾಜೀವ್‌ಗಾಂಧಿ ವಸತಿ ನಿಗಮ ನಿಯಮಿತದ ವತಿಯಿಂದ ವಸತಿ ನಿರ್ಮಿಸಿಕೊಡುವ ಕಾಮಗಾರಿಯನ್ನು ಶೀಘ್ರವಾಗಿ ಪ್ರಾರಂಭಿಸುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

4) **ಶ್ರೀ ಎಂ. ಅಶ್ವಿನ್ ಕುಮಾರ್ ಅವರು** – ಟಿ. ನರಸೀಪುರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ನಿಲಸೋಗೆ ಗ್ರಾಮದಲ್ಲಿ ವಿದ್ಯುತ್ ಅವಘಡದಿಂದ ಒಂದೇ ಕುಟುಂಬದ ಮೂರು ಜನರು ಮೃತಪಟ್ಟಿದ್ದು, ಆ ಕುಟುಂಬಕ್ಕೆ ಸೂಕ್ತ ಪರಿಹಾರ ಮತ್ತು ಸರ್ಕಾರಿ ಉದ್ಯೋಗ ನೀಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

5) **ಶ್ರೀ ಕೆ.ಎಂ. ಶಿವಲಿಂಗೇಗೌಡ ಮತ್ತು ಶ್ರೀ ಕಳಕಪ್ಪ ಬಂಡಿ ಅವರುಗಳು** – ಜಲ್ಲಿ ಕ್ರಷಿಂಗ್ ಘಟಕಗಳು ಮುಷ್ಕರ ಪ್ರಾರಂಭಿಸಿರುವುದರಿಂದ ರಸ್ತೆ ಮತ್ತು ಕಟ್ಟಡಗಳ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡು ಕಾರ್ಮಿಕರು ಬೀದಿ ಪಾಲಾಗುವ ಪರಿಸ್ಥಿತಿ ಉಂಟಾಗಿರುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

6) **ಶ್ರೀ ಗೂಳಿಹಟ್ಟಿ ಡಿ. ಶೇಖರ್ ಅವರು** – ಭೋವಿ ಅಭಿವೃದ್ಧಿ ನಿಗಮದಲ್ಲಿ ನಿಯಮಗಳನ್ನು ಗಾಳಿಗೆ ತೂರಿ ಸಮಾಜದ ಕೆಲವೇ ಕೆಲವು ಫಲಾನುಭವಿಗಳಿಗೆ ರೂ. 10.00 ಲಕ್ಷ ಮಂಜೂರು ಮಾಡಿ 25 ಸಾವಿರ ಮಾತ್ರ ಫಲಾನುಭವಿಗಳಿಗೆ ನೀಡಿ ಉಳಿದ ಹಣವನ್ನು ಮಧ್ಯವರ್ತಿಗಳ ಮುಖಾಂತರ ಪ್ರಮುಖರು ದುರುಪಯೋಗಪಡಿಸಿಕೊಳ್ಳುತ್ತಿರುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

7) **ಶ್ರೀ ಜಿ. ಕರುಣಾಕರ ರೆಡ್ಡಿ ಅವರು** – ಹರಪನಹಳ್ಳಿ ತಾಲ್ಲೂಕಿನ ಅಮೃತ ವಸತಿ ಯೋಜನೆಯಡಿ ಆಯ್ಕೆಯಾದ ಗ್ರಾಮಪಂಚಾಯಿತಿ ಫಲಾನುಭವಿಗಳನ್ನು ಹಾಗೂ ಅತಿವೃಷ್ಟಿಯಿಂದ ಹಾನಿಗೊಳಗಾದ ಮನೆಗಳಿಗೆ ಪರಿಹಾರವನ್ನು ಪಡೆದುಕೊಂಡ ಫಲಾನುಭವಿಗಳು ವಸತಿ ಯೋಜನೆಯಡಿಯಲ್ಲಿ ಮನೆಗಳನ್ನು ಪಡೆಯಲು ಆರ್.ಜಿ.ಹೆಚ್.ಸಿ.ಎಲ್. ತಂತ್ರಾಂಶದಲ್ಲಿ ಸೇರಿಸುವ ಬಗ್ಗೆ ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಗಮನ ಸೆಳೆಯುವುದು.

.. 5/ ..

8) **ಶ್ರೀ ಎಲ್. ನಾಗೇಂದ್ರ ಅವರು** – ರಾಜ್ಯದಲ್ಲಿ ಮಹಾನಗರ ಪಾಲಿಕೆಗಳ ವ್ಯಾಪ್ತಿಯಲ್ಲಿ ನಿರ್ಮಾಣವಾಗುವಂತಹ ಕಟ್ಟಡಗಳು Completion Report ಪಡೆದುಕೊಳ್ಳದೇ ಇದ್ದಲ್ಲಿ ಎರಡು ಪಟ್ಟು ಹೆಚ್ಚುವರಿ ತೆರಿಗೆ ವಿಧಿಸುವುದನ್ನು ಹಿಂಪಡೆದು ಸಾರ್ವಜನಿಕರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

9) **ಶ್ರೀ ದಿನಕರ ಕೇಶವ ಶೆಟ್ಟಿ ಅವರು** – ಉತ್ತರ ಕನ್ನಡ ಜಿಲ್ಲೆಯಲ್ಲಿ ಶೇತ್ಕಿ/ಕೃಷಿ ಭೂಮಿಯಲ್ಲಿ ವಸತಿ ಉದ್ದೇಶಕ್ಕೆ ಈಗಾಗಲೇ ಫಾರಂ ಹೌಸ್ ಮತ್ತು ಮನೆ ನಿರ್ಮಿಸಿಕೊಂಡಿರುವ/ನಿರ್ಮಿಸಿಕೊಳ್ಳುವ ಕುಟುಂಬಗಳಿಗೆ ಭೂಪರಿವರ್ತನೆಯಲ್ಲಿ ವಿನಾಯಿತಿ ನೀಡಿ ಇ–ಸ್ವತ್ತು ಖಾತ ನೀಡಲು ನಿಯಮಗಳಲ್ಲಿ ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

10) **ಶ್ರೀ ಎಂ.ಪಿ. ಕುಮಾರಸ್ವಾಮಿ ಅವರು** – ಮೂಡಿಗೆರೆ ಮತಕ್ಷೇತ್ರದ ಕಳಸ ತಾಲ್ಲೂಕಿನ ಕಳಸ ಇನಾಂ ಲ್ಯಾಂಡ್‌ಗೆ ಬದಲಿ ಜಾಗವನ್ನು ನೀಡಿ ರೈತರು/ಜನಸಾಮಾನ್ಯರಿಗೆ ಅನುಕೂಲ ಮಾಡಿಕೊಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11) **ಶ್ರೀ ಟಿ. ರಘುಮೂರ್ತಿ ಅವರು** – ಕೇಂದ್ರ ಸರ್ಕಾರದ ಅನುಮೋದನೆ ಇಲ್ಲದಿದ್ದರೂ ಸಹ ರಾಜ್ಯದಲ್ಲಿರುವ ಗಂಗಾಮತಸ್ಥ ಮತ್ತು ಇನ್ನಿತರೆ ಜಾತಿಯ ತಳವಾರ ಜನಾಂಗದವರನ್ನು ಪರಿಶಿಷ್ಟ ಪಂಗಡದ ಮೀಸಲಾತಿಗೆ ಒಳಪಡಿಸಲಾಗಿದೆ ಎಂದು ಇತ್ತೀಚೆಗೆ ಗುಲ್ಬರ್ಗಾ ನಗರದಲ್ಲಿ ಹಿಂದುಳಿದ ವರ್ಗಗಳ ಜನಾಂಗದವರ ಸಮಾವೇಶದಲ್ಲಿ ಹೇಳಿಕೆ ನೀಡಿರುವ ಬಗ್ಗೆ ಸ್ಪಷ್ಟೀಕರಣ ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

12) **ಶ್ರೀ ಡಿ.ಕೆ. ಶಿವಕುಮಾರ್ ಅವರು** – ಹೊಸ ಟಿ.ಡಿ.ಆರ್. ಪಾಲಿಸಿಯ ಪ್ರಕಾರ ಮಾರುಕಟ್ಟೆ ದರದ ಬೆಲೆಗಿಂತ ಶೇ. 50ರಷ್ಟು ಕಡಿಮೆ ರಿಯಾಯಿತಿ ನೀಡಿ ಟಿ.ಡಿ.ಆರ್. ಮಾರುತ್ತಿರುವುದರಿಂದ ಸರ್ಕಾರದ ಬೊಕ್ಕಸಕ್ಕೆ ಕೋಟಿ ರೂಪಾಯಿಗಳು ನಷ್ಟವಾಗುತ್ತಿರುವ ಬಗ್ಗೆ ಹಾಗೂ ಹಿಂದಿನ ಮತ್ತು ಪ್ರಸ್ತುತ ಟಿ.ಡಿ.ಆರ್.ಗೂ ವ್ಯತ್ಯಾಸವಿರುವುದರಿಂದ ಜಮೀನು ಕಳೆದುಕೊಂಡವವರಿಗೆ ಅನ್ಯಾಯವಾಗುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

13) **ಶ್ರೀ ಬಸನಗೌಡ ಆರ್. ಪಾಟೀಲ್ (ಯತ್ನಾಳ್) ಅವರು** – ಬಿ.ಐ.ಎಸ್. ಲೈಸೆನ್ಸ್ ಪಡೆದ ಸಂಸ್ಥೆಗಳಿಗೆ ಮಾತ್ರ ಪೌಷ್ಟಿಕ ಆಹಾರ ತಯಾರಿಕೆ ಮತ್ತು ನಿರ್ವಹಣೆ ಕಾರ್ಯವನ್ನು ನೀಡಿರುವುದರಿಂದ ಈವರೆಗೆ ಸರಬರಾಜು ಮಾಡುತ್ತಿದ್ದ ಎಂ.ಎಸ್.ಪಿ.ಟಿ.ಸಿ. ಗುಂಪುಗಳಿಗೆ ಅದರಲ್ಲೂ ವಿಶೇಷವಾಗಿ ಮಹಿಳೆಯರ ಜೀವನ ನಿರ್ವಹಣೆಗೆ ತೊಂದರೆಯಾಗುತ್ತಿರುವುದರಿಂದ ಈ ಹಿಂದೆ ಇದ್ದಂತೆ ಆಹಾರ ತಯಾರಿಕೆ ಮತ್ತು ನಿರ್ವಹಣೆ ಕಾರ್ಯವನ್ನು ವಹಿಸುವ ಬಗ್ಗೆ ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಗಮನ ಸೆಳೆಯುವುದು.

14) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ ವೈದ್ಯಕೀಯ ವಿದ್ಯಾಲಯಕ್ಕೆ ಆಡಳಿತಾಧಿಕಾರಿ ಹುದ್ದೆಗೆ ನೇಮಕ ಮಾಡಿರುವ ಪ್ರಾದೇಶಿಕ ಆಯುಕ್ತರ ಆದೇಶವನ್ನು ರದ್ದುಪಡಿಸಿ, ಇತರ ವೈದ್ಯಕೀಯ ವಿದ್ಯಾಲಯಗಳಂತೆ ವೈದ್ಯಕೀಯ ನಿರ್ದೇಶಕರಿಗೆ ಅಧಿಕಾರ ನೀಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

15) **ಶ್ರೀ ಹಾಲಾಡಿ ಶ್ರೀನಿವಾಸ ಶೆಟ್ಟಿ ಅವರು** – ನಿವೇಶನ ರಹಿತರಿಗೆ ನಿವೇಶನ ನೀಡುವಾಗ ಅನುಮೋದಿತ ವಸತಿ ಬಡಾವಣೆ ಯೋಜನೆಯಲ್ಲಿರುವಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಿ, ವಸತಿ ನಿವೇಶನವನ್ನು ನಿರ್ಮಾಣ ಮಾಡಿ ಕನಿಷ್ಟ 10 ಸೆಂಟ್ಸ್ ನಿವೇಶನಗಳನ್ನು ನೀಡುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

16) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹೊಳೆನರಸೀಪುರ ಪಟ್ಟಣದಲ್ಲಿ ಪೊಲೀಸ್ ವಸತಿ ಗೃಹಗಳ ನಿರ್ಮಾಣಕ್ಕೆ ಬಾಕಿ ಇರುವ ಅನುದಾನವನ್ನು ಬಿಡುಗಡೆಗೊಳಿಸಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

17) **ಶ್ರೀ ಶ್ರೀಮಂತ ಬಾಳಾ ಸಾಹೇಬ ಪಾಟೀಲ್ ಅವರು** – ಕಾಗವಾಡ ವಿಧಾನಸಭಾ ಮತಕ್ಷೇತ್ರದ ಶಹಪುರ ಗ್ರಾಮವು ಸಂಪೂರ್ಣವಾಗಿ ಮುಳುಗಡೆಗೊಂಡಿದ್ದು, 112 ಮನೆಗಳನ್ನು ತಪ್ಪಾಗಿ ಸಿ–ಅಂತ ಎಂದು ನಮೂದಿಸಲಾಗಿರುವುದರಿಂದ ಮನೆಗಳಿಲ್ಲದೆ ನಿರಾಶ್ರಿತರಾಗಿರುವ ಕುಟುಂಬಗಳ ಹಿತದೃಷ್ಟಿಯಿಂದ ಬಿ–ಅಂತ ಮಾರ್ಪಡಿಸಿ ನಮೂದಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

## 9. ಶಾಸನ ರಚನೆ

### ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

**ಶ್ರೀ ವಿ. ಸುನಿಲ್ ಕುಮಾರ್ (ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು) ಅವರು:–**

ಅ) 2022ನೇ ಸಾಲಿನ ಕನ್ನಡ ಭಾಷಾ ಸಮಗ್ರ ಅಭಿವೃದ್ಧಿ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 10. ಅರ್ಧ ಗಂಟೆ ಕಾಲಾವಧಿ ಚರ್ಚೆ

**ಶ್ರೀ ಸಿದ್ದು ಸವದಿ ಅವರು** – ಬಸ್ಸುಗಳ ಸೌಲಭ್ಯ ಕುರಿತಂತೆ ದಿನಾಂಕ: 21.12.2022ರಂದು ಮೂರನೇ ಪಟ್ಟಿಯಲ್ಲಿನ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ 34(639)ಕ್ಕೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

**ಎಂ.ಕೆ. ವಿಶಾಲಾಕ್ಷಿ**
**ಕಾರ್ಯದರ್ಶಿ**

**ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**
http://kla.kar.nic.in/assembly/lob/lob.htm